2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಕನಕಪುರ, ಬೆಂಗಳೂರು ದಕ್ಷಿಣ ಜಿಲ್ಲೆ.

ಎಸ್.ಸಿ.5033/2024

ದಿ:08.01.2026
ಚಾಸಾ-7 ಪ್ರಾಸಾ-4

| | |
|---|---|
| ಹೆಸರು | : ದಾಳೇಶ್ ಎ.ಎಲ್. |
| ತಂದೆಯ ಹೆಸರು | : ಲೇಟ್ ಲಕ್ಷ್ಮಣೇಗೌಡ |
| ವಯಸ್ಸು | : 45 ವರ್ಷ |
| ಉದ್ಯೋಗ | : ವಲಯ ಅರಣ್ಯಾಧಿಕಾರಿಗಳು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ |
| ವಾಸ | : ಬೆಂಗಳೂರು |

**(ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು)**
**ಮುಖ್ಯವಿಚಾರಣೆ: ಮಾನ್ಯ ಸರ್ಕಾರಿ ಅಭಿಯೋಜಕರಿಂದ**

ನಾನು ದಿ:29.07.2020 ರಿಂದ ದಿ:08.09.2024ರವರೆಗೆ ಕನಕಪುರ ವಲಯ ಅರಣ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ:29.07.2020ರಂದು ಚಾಸಾ-5ರವರಿಂದ ಈ ಪ್ರಕರಣದ ತನಿಖೆಯನ್ನು ಪಡೆದುಕೊಂಡು ಪರಿಶೀಲಿಸಿರುತ್ತೇನೆ.

ದಿ:01.09.2022ರಂದು ಚಾಸಾ-6ರವರು ದೋಷಾರೋಪಣ ಪಟ್ಟಿಯನ್ನು ಸಲ್ಲಿಸಲು ಅನುಮತಿ ನೀಡಿದ ಮೇರೆಗೆ ಆರೋಪಿತರ ವಿರುದ್ಧ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ನಂತರ ಸದರಿ ಆದೇಶದ ಪ್ರತಿಯನ್ನು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ಸದರಿ ಆದೇಶ ಪ್ರತಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ಶ್ರೀ ಎಬಿಎಸ್, ಆರೋಪಿತರ ಪರ ವಕೀಲರಿಂದ**

ನಾನು ಆರೋಪಿತರ ವಿರುದ್ಧ ದೋಷಾರೋಪಣ ಪಟ್ಟಿಯನ್ನು ಸಲ್ಲಿಸುವಾಗ ಶ್ರೀಗಂಧದ ತುಂಡುಗಳು ಎಂದು ಹೇಳಲಾದ ಮರದ ತುಂಡಿನ ಬಗ್ಗೆ ಯಾವುದೇ ತಜ್ಞರ ಅಭಿಪ್ರಾಯವನ್ನು ಪಡೆದುಕೊಂಡು ದೋಷಾರೋಪಣ ಪಟ್ಟಿ ಸಲ್ಲಿಸಿರುವುದಿಲ್ಲ ಎಂಬ ಪ್ರಶ್ನೆಗೆ ಸಾಕ್ಷಿಯು ನಾನು ಈ ಪ್ರಕರಣದ ಕಡತವನ್ನು ಸುಪರ್ದಿಗೆ ಪಡೆದುಕೊಳ್ಳುವ ಸಮಯದಲ್ಲಿ ತನಿಖೆಯನ್ನು ಪೂರ್ಣಗೊಂಡಿರುತ್ತದೆ ಎಂದು ಸಾಕ್ಷಿ ನುಡಿಯುತ್ತಾರೆ. ನಾನು ಆರೋಪಿತರ ವಿರುದ್ಧ ಸುಳ್ಳು ದೋಷಾರೋಪಣ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ - ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ. ಎಂದು ಸಾಕ್ಷಿ ಒಪ್ಪಿರುತ್ತಾರೆ.

(**ಕುಮಾರ್ ಹೆಚ್.ಎನ್**)
2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕನಕಪುರ, ಬೆಂಗಳೂರು ದಕ್ಷಿಣ ಜಿಲ್ಲೆ.